**ಸಿಸಿ ನಂಬರಃ 1326/2025**

**ಪಿ.ಡಬ್ಲ್ಯೂಃ 1**

**<u>ಸತ್ಯ ಪ್ರತಿಜ್ಞೆಯ ಮೇರೆಗೆ, ತಾಃ 06-11-2025</u>**

**<u>(ಸಾಕ್ಷಿಯ ಸ್ವಪ್ರಮಾಣೀಕೃತ ಹೇಳಿಕೆಯನ್ನು ಮುಖ್ಯ ವಿಚಾರಣೆಯಾಗಿ ಪರಿಗಣಿಸಲಾಗಿರುತ್ತದೆ.)</u>**

**<u>ಮುಂದುವರೆದ ಮುಖ್ಯ ವಿಚಾರಣೆಃ ಫಿರ್ಯಾದುದಾರರ ಪರ ಶ್ರೀ ಎಮ್.ಎಮ್.ಎನ್. ವಕೀಲರಿಂದ,</u>**

ನನಗೆ ಈ ಪ್ರಕರಣವನ್ನು ನಡೆಸಲು ಫಿರ್ಯಾದಿ ಸಂಘದವರು ಅಧಿಕಾರ ನೀಡಿರುವುದಕ್ಕೆ ಸಂಬಂಧಿಸಿದಂತೆ ಠರಾವಿನ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಆರೋಪಿ ಕೊಟ್ಟ ಹೆಚ್.ಡಿ.ಎಫ್.ಸಿ. ಬ್ಯಾಂಕಿನ ಚೆಕ್ ಸಂಖ್ಯೆ 000013 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಚೆಕ್ ನಲ್ಲಿರುವ ಆರೋಪಿಯ ಸಹಿಯನ್ನು ನಿಪಿ-2(ಎ) ಎಂದು, ಬ್ಯಾಂಕಿನ ಹಿಂಬರಹವನ್ನು ನಿಪಿ-3 ಎಂದು, ಆರೋಪಿಗೆ ವಕೀಲರ ಮೂಲಕ ಕೊಟ್ಟ ನೋಟೀಸಿನ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ಅಂಚೆ ರಶೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು, ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು, ಆರೋಪಿಯ ಸಾಲದ ಅರ್ಜಿಯ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-7 ಎಂದು, ಆರೋಪಿಯ ಸಾಲದ ಕರಾರಿನ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-8 ಎಂದು, ಆರೋಪಿಯ ಸಾಲದ ಡಿಮಾಂಡ ಪ್ರೊಮಿಸರಿ ನೋಟಿನ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-9 ಎಂದು, ಆರೋಪಿಗೆ ಸಾಲದ ಹಣ ಪಾವತಿ ಮಾಡಿದ ಬಾಬ್ತು ರಶೀದಿಯ ಯಥಾನಕಲನ್ನು ಹಾಜರುಪಡಿಸಿದ್ದು ಅದನ್ನು ಮೂಲ ದಾಖಲೆಯೊಂದಿಗೆ ತಾಳೆ ನೋಡಿ ಅದನ್ನು ನಿಪಿ-10 ಎಂದು, ಸಾಲದ ಖಾತೆಯ ಸ್ಟೇಟಮೆಂಟನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

**(ನಿಪಿ-7 ರಿಂದ 10 ರ ಮೂಲ ದಾಖಲೆಗಳನ್ನು ಅವಶ್ಯಕತೆ ಇದ್ದಾಗ ಹಾಜರುಪಡಿಸಬೇಕೆಂಬ ಷರತ್ತಿಗೆ ಒಳಪಟ್ಟು ಸಾಕ್ಷಿಗೆ ವಾಪಸ್ಸು ನೀಡಲಾಯಿತು.)**

**<u>ಪಾಟೀ ಸವಾಲಿಗೆ ಆರೋಪಿ ಪರ ವಕೀಲರು ಕಾಲಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.</u>**

**(ನನ್ನ ಹೇಳಿಕೆ ಬಹಿರಂಗ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.)**

**ಓ.ಹೇ.ಕೇ. ಸರಿ ಇದೆ.**

**ಸಹಿ ಇದೆ.**

**ಹೆಚ್ಚುವರಿ ನ್ಯಾ.ದಂ., ಭಟ್ಕಳ**